ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1237 (1262)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ವಿಷಯ : ಎಣ್ಣೆಹೊಳೆ ಹಿನ್ನೀರನ್ನು ಸ್ಥಳಾಂತರಿಸಿರುವ ಬಗ್ಗೆ

(ಅ) ಸಾಗರ ತಾಲ್ಲೂಕಿನ ಹಲ್ಕೆ ಗ್ರಾಮದಿಂದ ಕಾರ್ಗಲ್-ಜೋಗಕ್ಕೆ ಸಂಪರ್ಕ ಕಲ್ಪಿಸುವ ಎಣ್ಣೆಹೊಳೆ ಹಿನ್ನೀರಿನಲ್ಲಿ ಸಂಚರಿಸುತ್ತಿದ್ದ ಹೊಸ ಲಾಂಚ್‌ನ್ನು ಸ್ಥಳಾಂತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಲಾಂಚನ್ನು ಎಲ್ಲಿಗೆ ಸ್ಥಳಾಂತರಿಸಲಾಗಿದೆ ಮತ್ತು ಏಕೆ ಎಂದು ಕಾರಣ ತಿಳಿಸುವುದು ;

(ಇ) ಈ ಭಾಗದಲ್ಲಿ ಯಾವ ಯಾವ ಮಾರ್ಗದಲ್ಲಿ ಲಾಂಚಿನ ಅವಶ್ಯಕತೆ ಇದೆ ಎಂದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಲ್ಲಿನ ಗ್ರಾಮಸ್ಥರು ಲಾಂಚ್ ಬೇಕೆಂದು ಸರ್ಕಾರಕ್ಕೆ ಬೇಡಿಕೆಯನ್ನು ಸಲ್ಲಿಸಿರುತ್ತಾರೆಯೇ ;

(ಈ) ಕಳೆದ ಚುನಾವಣೆಯಲ್ಲಿ ಚನ್ನಗೊಂಡ ಪಂಚಾಯಿತಿ ವ್ಯಾಪ್ತಿಯ ಸಿಗ್ಲು ಗ್ರಾಮಸ್ಥರು ಮತದಾನ ಬಹಿಷ್ಕಾರ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?